ಭಾರತ ಮತ ಮಹಾ ಸಮರ

ಸಮಾಚಾರ ಸಣ್ಣದಲ್ಲ

ದಾಖಲೆ ಇಲ್ಲದ 2.2 ಕೋಟಿ ರು. ವಶ

ಹುಬ್ಬಳ್ಳಿ: ಚುನಾವಣಾ ನೀತಿ ಸಂಹಿತೆ ಜಾರಿ ಹಿನ್ನೆಲೆಯಲ್ಲಿ ದಾಖಲೆ ಇಲ್ಲದೆ ಸಾಗಾಟ ಮಾಡುತ್ತಿದ್ದ 2 ಕೋಟಿ ರೂಪಾಯಿಗೂ ಅಧಿಕ ನಗದು ಹಣವನ್ನು ಚುನಾವಣಾಧಿಕಾರಿಗಳು ಹಾಗೂ ಪೊಲೀಸರು ವಶಕ್ಕೆ ಪಡೆದಿರುವ ಘಟನೆ ಕುಂದಗೋಳ ತಾಲೂಕಿನ ರಾಮನಕೊಪ್ಪ ಗ್ರಾಮದಲ್ಲಿ ನಡೆದಿದೆ.

ಶಿಗ್ಗಾಂವಿಯಿಂದ ಬ್ರಿಜಾ ಕಾರಿನಲ್ಲಿ ಹಣವಿದ್ದ ಬ್ಯಾಗ್‌ಗಳೊಂದಿಗೆ ಪರಾರಿಯಾಗುತ್ತಿದ್ದ ಕಾರನ್ನು ಬೆನ್ನಟ್ಟಿದ ಚುನಾವಣಾ ಫ್ಲೈಯಿಂಗ್ ಸ್ಕ್ವಾಡ್ ಸಿಬ್ಬಂದಿ ವಶಕ್ಕೆ ಪಡೆದಿದ್ದಾರೆ. ಹಣ ತಂದವರು ತಪ್ಪಿಸಿಕೊಳ್ಳಲು ವಿಫಲ ಯತ್ನ ನಡೆಸಿದ್ದಾರೆ. ಸದ್ಯ ಕಾರಿನಲ್ಲಿದ್ದ ಬ್ಯಾಗ್‌ಗಳಲ್ಲಿ 2 ಕೋಟಿಗೂ ಅಧಿಕ ಹಣ ಪತ್ತೆಯಾಗಿದೆ. ಈ ಹಣವನ್ನು ಚುನಾವಣೆಯಲ್ಲಿ ಹಂಚಲು ತರಲಾಗಿತ್ತಾ? ಅಥವಾ ಯಾವುದೋ ವ್ಯವಹಾರಕ್ಕೆ ಸಾಗಾಟ ಮಾಡಲಾಗುತ್ತಿತ್ತಾ ಎಂಬ ಬಗ್ಗೆ ಮಾಹಿತಿ ಕಲೆ ಹಾಕಲಾಗುತ್ತಿದೆ ಎಂದು ಅಧಿಕಾರಿಗಳು ತಿಳಿಸಿದ್ದಾರೆ. ಸ್ಥಳದಲ್ಲಿ ಧಾರಾವಾಡ ಎಸ್‌ಪಿ ಗೋಪಾಲ ಬ್ಯಾಕೋಡ್ ಹೆಚ್ಚುವರಿ ಪೊಲೀಸ್ ಅಧೀಕ್ಷಕ ನಾರಾಯಣ ಭರಮನಿ ಸೇರಿದಂತೆ ಚುನಾವಣಾಧಿ ಕಾರಿಗಳು, ಆದಾಯ ತೆರಿಗೆ ಅಧಿಕಾರಿಗಳು ಮೊಕ್ಕಾಂ ಹೂಡಿದ್ದು, ಹಣದ ಮೂಲದ ಬಗ್ಗೆ ತನಿಖೆ ಮುಂದುವರೆದಿದೆ.

ಕಾಂಗ್ರೆಸ್ ಸರಕಾರಕ್ಕೆ ಜನರ ಹಿತ ಮುಖ್ಯವಲ್ಲ

ಶಿಡ್ಲಘಟ್ಟ: ರಾಜ್ಯದಲ್ಲಿ ಕಾಂಗ್ರೆಸ್ ಸರಕಾರಕ್ಕೆ ಜನರ ಹಿತ ಮುಖ್ಯವಲ್ಲ, ಮುಖ್ಯಮಂತ್ರಿ ಸಿದ್ದರಾಮಯ್ಯ ಮತ್ತು ಉಪಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ಅವರಿಬ್ಬರಿಗೂ ಅವರವರ ಕುರ್ಚಿ ಉಳಿಸಿಕೊಳ್ಳುವುದು ಮುಖ್ಯವಾಗಿದೆ ಎಂದು ಮಾಜಿ ಮುಖ್ಯಮಂತ್ರಿ ಡಿ.ವಿ.ಸದಾನಂದಗೌಡ ಟೀಕಿಸಿದರು.

ಸೋಮವಾರ ಬಿಜೆಪಿ ಹಾಗೂ ಜೆಡಿಎಸ್ ಮೈತ್ರಿ ಅಭ್ಯರ್ಥಿ ಮಲ್ಲೇಶ್ ಬಾಬು ಪರ ಪ್ರಚಾರದಲ್ಲಿ ಭಾಗವಹಿಸಿ ಮಾತನಾಡಿ, ರೈತರ ಬಗ್ಗೆ ಕಾಳಜಿ ಇದ್ದಿದ್ದರೆ ಸರಿಯಾದ ಸಮಯಕ್ಕೆ ಬರ ಪರಿಹಾರಕ್ಕಾಗಿ ಕೇಂದ್ರಕ್ಕೆ ಮೊರೆ ಇಡುತ್ತಿದ್ದರು. ಇಲ್ಲವೇ ತಮ್ಮ ಬೊಕ್ಕಸದಿಂದ ರೈತರಿಗೆ ಬರ ಪರಿಹಾರದ ಹಣ ನೀಡುತ್ತಿದ್ದರು. ಅದು ಬಿಟ್ಟು ಕೇಂದ್ರದತ್ತ ಬೊಟ್ಟು ಮಾಡಿ ರೈತರನ್ನು ದಿಕ್ಕು ತಪ್ಪಿಸುವ ಕೆಲಸ ಮಾಡುತ್ತಿದ್ದಾರೆ ಎಂದರು.

ಬಿಜೆಪಿಯದ್ದು ಫೋಟೊ ಆಲ್ಬಂ ಪ್ರಣಾಳಿಕೆ

ಕಲಬುರಗಿ: ಗೊತ್ತು, ಗುರಿ ಇಲ್ಲದ ಬಿಜೆಪಿಯ ಚುನಾವಣೆಯ ಪ್ರಣಾಳಿಕೆಯು ಪ್ರಧಾನಿ ನರೇಂದ್ರ ಮೋದಿ ಅವರ ಫೋಟೊ ಆಲ್ಬಂನಂತೆ ಇದೆ ಎಂದು ಸಚಿವ ಪ್ರಿಯಾಂಕ್ ಖರ್ಗೆ ವ್ಯಂಗ್ಯವಾಡಿದರು.

ಸುದ್ದಿಗಾರರೊಂದಿಗೆ ಮಾತನಾಡಿ, ಪ್ರಣಾಳಿಕೆ ಪುಸ್ತಕದಲ್ಲಿ ಮೋದಿ ಅವರು ಪಿಕ್ನಿಕ್ ತರಹೇವಾರಿ ಫೋಟೊಗಳು ಬಿಟ್ಟರೆ ಯುವಕರು, ಮಹಿಳೆಯರು, ರೈತರು, ಬಡವರು, ಶ್ರಮಿಕರು ಹಾಗೂ ನಿರ್ಗತಿಕರಿಗೆ ಉಪಯೋಗ ಆಗುವಂತ ಯಾವುದೇ ಅಂಶಗಳಿಲ್ಲ, ಕೊಟ್ಟ ಆಶ್ವಾಸನೆಗಳು ಹೇಗೆ, ಯಾವಾಗ ಈಡೇರಿಸುತ್ತೇವೆ ಎನ್ನುವ ಸ್ಪಷ್ಟತೆ ಕಾಣಿಸುತ್ತಿಲ್ಲ ಎಂದು ಹೇಳಿದರು.

ಅಚ್ಛೇದಿನ್, ಅಮೃತ ಕಾಲ, ಸ್ಕಿಲ್ ಇಂಡಿಯಾ, ಮೇಕ್ ಇನ್ ಇಂಡಿಯಾ ಘೋಷಣೆಗಳು ಏನಾದವು? 100 ಸ್ಮಾರ್ಟ್ ಸಿಟಿಗಳ ಎಲ್ಲಿಗೆ ಬಂದವು? ವರ್ಷಕ್ಕೆ 2 ಕೋಟಿಯಂತೆ 20 ಕೋಟಿ ಉದ್ಯೋಗ ಸೃಷ್ಟಿಯಾಗಿವೆಯಾ? ವಾರಂಟಿಯೇ ಇಲ್ಲದ ಮೋದಿ ಗ್ಯಾರಂಟಿಗಳನ್ನು ಜನರು ನಂಬುವುದಿಲ್ಲ, ನಮ್ಮ ಸರಕಾರದ ಗ್ಯಾರಂಟಿಗಳನ್ನೇ ಕಾಪಿ ಮಾಡಿಕೊಂಡಿದ್ದಾರೆ ಎಂದರು.

ಸಿಎಂ, ಡಿಸಿಎಂ, ಬಿಜೆಪಿ, ಜೆಡಿಎಸ್ ಅಧ್ಯಕ್ಷರಿಗೆ ಗೆಲ್ಲುವ ಅನಿವಾರ್ಯ, ಸೋತರೆ ಕುರ್ಚಿಗೇ ಕಂಟಕದ ಭಯ

ಅಳಿವು, ಉಳಿವಿನ ಸಮರದಲ್ಲಿ ರಾಜ್ಯ ನಾಯಕರು

ಶಿವಕುಮಾರ್ ಬೆಳ್ಳಿತಟ್ಟೆ ಬೆಂಗಳೂರು



ರಾಜ್ಯದಲ್ಲಿ ಲೋಕಸಭೆಯ ಎರಡೂ ಹಂತದ ಚುನಾವಣೆ ಪ್ರಕ್ರಿಯೆಗಳು ಆರಂಭವಾಗಿರುವ ಹಿನ್ನೆಲೆಯಲ್ಲಿ ಮುಖ್ಯಮಂತ್ರಿ, ಉಪ ಮುಖ್ಯ ಮಂತ್ರಿ ಹಾಗೂ ಮಾಜಿ ಮುಖ್ಯಮಂತ್ರಿಗಳೂ ಸೇರಿದಂತೆ ಅನೇಕ ರಾಜಕೀಯ ಘಟಾನುಘಟಿಗಳು ಪ್ರತ್ಯಕ್ಷ ಹಾಗೂ ಪರೋಕ್ಷವಾಗಿ ರಣಾಂಗಣಕ್ಕೆ ಇಳಿದಂತಾಗಿದೆ.

ಈ ಚುನಾವಣೆ ಮೇಲ್ನೋಟಕ್ಕೆ ಸೋಲು, ಗೆಲುವಿನ ಸಮರದಂತೆ ಕಂಡುಬಂದರೂ ವಾಸ್ತವ ದಲ್ಲಿ ಮುಖ್ಯಮಂತ್ರಿ, ಉಪ ಮುಖ್ಯ ಮಂತ್ರಿ ಸೇರಿದಂತೆ ಅನೇಕ ನಾಯಕರಿಗೆ ರಾಜಕೀಯ ಉಳಿವಿನ ಪ್ರಶ್ನೆಯಾಗಿದೆ. ಅಂದರೆ ಅವರು ಅಥವಾ ಅವರು ಕಣಕ್ಕಿಳಿಸಿರುವ ಅಭ್ಯರ್ಥಿಗಳು ಚುನಾವಣೆಯಲ್ಲಿ ಗೆದ್ದರೆ ಕುರ್ಚಿಗಳು ಗಟ್ಟಿಯಾಗಿ ಉಳಿಯಲಿವೆ. ರಾಜಕೀಯ ಸ್ಥಾನಮಾನಗಳು ಮತ್ತು ಪಕ್ಷಗಳಲ್ಲಿ ಅವರ ರಾಜಕೀಯ ಮಹತ್ವ ಉಳಿಯಲಿವೆ. ಇಲ್ಲವಾದರೆ ಅವರ ಹುದ್ದೆಗಳಿಗೆ ಕುತ್ತು ಬರುವುದಲ್ಲದೆ, ರಾಜಕಾರಣದಲ್ಲಿ ಅವರ ಮಹತ್ವ ಮತ್ತು ಅವಕಾಶಗಳು ಕಡಿಮೆಯಾಗುವ ಸಂಭವ ಹೆಚ್ಚಾಗಿರುತ್ತದೆ ಎನ್ನಲಾಗಿದೆ.

ಈ ಆತಂಕ ಈಗ ರಾಜ್ಯದ ಮುಖ್ಯಮಂತ್ರಿ, ಉಪ ಮುಖ್ಯಮಂತ್ರಿ, ಪ್ರತಿಪಕ್ಷ ನಾಯಕ, ಬಿಜೆಪಿ ರಾಜ್ಯಾಧ್ಯಕ್ಷ, ಜೆಡಿಎಸ್ ರಾಜ್ಯಾಧ್ಯಕ್ಷ ಹಾಗೂ ಕೇಂದ್ರ ಸಚಿವರೂ ಸೇರಿದಂತೆ ಅನೇಕ ರಾಜಕೀಯ ನಾಯಕರನ್ನು ಕಾಡುತ್ತಿದೆ. ಇದಕ್ಕೆ ಇತ್ತೀಚಿಗೆ ಮುಖ್ಯಮಂತ್ರಿ ಮತ್ತು ಉಪ ಮುಖ್ಯಮಂತ್ರಿ, ಬಿಜೆಪಿ ರಾಜ್ಯಾಧ್ಯಕ್ಷ ಹಾಗೂ ಜೆಡಿಎಸ್ ನಾಯಕರು ಚುನಾವಣಾ ಪ್ರಚಾರದ ವೇಳೆ ತಮ್ಮ ಸ್ಥಾನಮಾನಗಳ ಬಗ್ಗೆ ಪ್ರತ್ಯಕ್ಷ ಹಾಗೂ ಪರೋಕ್ಷವಾಗಿ ಮತದಾರರನ್ನು ವಿನಂತಿಸಿದ್ದೇ ಸಾಕ್ಷಿ.

ಇವರು ಸೋತರೆ ಅಪಾಯವಂತೆ

ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ವರುಣಾದಲ್ಲಿ ನಡೆದ ಚುನಾವಣಾ ಪ್ರಚಾರ ಸಭೆಯಲ್ಲಿ ಮಾತನಾಡುತ್ತಾ, ವರುಣಾ ಕ್ಷೇತ್ರ ಒಂದರಲ್ಲೇ ಮತದಾರರು 60 ಸಾವಿರ ಲೀಡ್ ಕೊಡಬೇಕು. ಆಗ ನನ್ನನ್ನು ಯಾರೂ ಮುಟ್ಟಲು ಸಾಧ್ಯವಿಲ್ಲ. ಮುಖ್ಯಮಂತ್ರಿಯಾಗಿ 5 ವರ್ಷ ಉಳಿಯಬೇಕಾದರೆ ಹೆಚ್ಚಿನ ಲೀಡ್‌ನಲ್ಲಿ ಗೆಲ್ಲಬೇಕೆಂದು ವಿನಂತಿಸಿದ್ದಾರೆ. ಇದನ್ನು ಪುತ್ರ ಯತೀಂದ್ರ, ಮಾಜಿ ಶಾಸಕ ಗುಬ್ಬಿ ವಾಸು ಹಾಗೂ ಮಾಜಿ ಸಚಿವ ಕೊಪ್ಪಳದ ಇಕ್ಬಾಲ್ ಅನ್ಸಾರಿ ಅವರೂ ಪುನರುಚ್ಚರಿಸಿ ಹೆಚ್ಚಿನ ಮತಗಳು ಸಿಗದಿದ್ದರೆ ಮುಖ್ಯಮಂತ್ರಿ ಸ್ಥಾನಕ್ಕೇ ತೊಂದರೆ ಎನ್ನುವ ಆತಂಕ ವ್ಯಕ್ತಪಡಿಸಿದ್ದಾರೆ.

ಇದೇ ವೇಳೆ ಉಪ ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್, ಒಕ್ಕಲಿಗರ ಸಭೆಯೊಂದರಲ್ಲಿ ಮುಖ್ಯಮಂತ್ರಿಯಾಗುವ ವಿಶ್ವಾಸದ ಮಾತುಗಳನ್ನಾಡಿದ್ದಾರೆ. ನೀವು ಕಾಂಗ್ರೆಸ್ ಗೆಲ್ಲಿಸದಿದ್ದರೆ ತಮಗೆ ಅಪಾಯವಿದೆ ಎನ್ನುವ ಮಾತುಗಳನ್ನಾಡಿದ್ದಾರೆ. ಹಾಗಂತ ಬಿಜೆಪಿಯ ನಾಯಕರಿಗೆ ಆತಂಕವಿಲ್ಲ ಎಂದೇನೂ ಅಲ್ಲ. ಈ ಚುನಾವಣೆಯಲ್ಲಿ ಬಿಜೆಪಿ ಹೆಚ್ಚಿನ ಸ್ಥಾನ ಗಳಿಸಿದ್ದರೆ ವಿಜಯೇಂದ್ರ ರಾಜ್ಯಾಧ್ಯಕ್ಷ ಸ್ಥಾನದಿಂದ ಇಳಿಯಬೇಕು ಎಂದು ಪಕ್ಷದ ನಾಯಕರಾದ ಕೆ.ಎಸ್. ಈಶ್ವರಪ್ಪ, ಬಸವಗೌಡ ಪಾಟೀಲ್ ಯತ್ನಾಳ್ ಸೇರಿದಂತೆ ಅನೇಕರು ಹೇಳಿದ್ದಾರೆ.

ಇನ್ನು ಜೆಡಿಎಸ್ ವಿಚಾರಕ್ಕೆ ಬಂದರೆ ಜೆಡಿಎಸ್ ಉಳಿಯ ಬೇಕಾದರೆ ಮಂಡ್ಯದಲ್ಲಿ ಕುಮಾರಸ್ವಾಮಿ ಗೆಲ್ಲಲೇಬೇಕೆಂದು ಪಕ್ಷದ ನಾಯಕರು ಸಾಹಸ ಮಾಡುತ್ತಿದ್ದಾರೆ. ಹಾಸನ ಕೈ ತಪ್ಪಿದರೂ ಪರವಾಗಿಲ್ಲ. ಮಂಡ್ಯದಲ್ಲಿ ಮಾತ್ರ ಕುಮಾರಸ್ವಾಮಿ ಗೆಲ್ಲಲೇ ಬೇಕೆನ್ನುವ ನಿಟ್ಟಿನಲ್ಲಿ ಮಾಜಿ ಪ್ರಧಾನಿ ದೇವೇಗೌಡರು, ಇಳಿವಯಸ್ಸಿನಲ್ಲೂ ಹಗಲಿರುಳು ರಾಜಕೀಯ ರಣತಂತ್ರಗಳನ್ನು ಹೆಣೆದು ರಣಾಂಗಣದಲ್ಲಿ ಪ್ರಯೋಗಿಸುತ್ತಿದ್ದಾರೆ. ಅದರ ಭಾಗವೇ ಮೈಸೂರಿನಲ್ಲಿ ಪ್ರಧಾನಿ ನರೇಂದ್ರ ಮೋದಿ ಜತೆ ಮಾಡಿದ ಅಬ್ಬರದ ಭಾಷಣ.

ಇವರಿಗೆ ರಾಜಕೀಯ ಬದುಕಿನ ಪ್ರಶ್ನೆ

ಬಿಜೆಪಿಯ ಮಾಜಿ ಮುಖ್ಯಮಂತ್ರಿಗಳಾದ ಜಗದೀಶ್ ಶೆಟ್ಟರ್, ಬಸವರಾಜ ಬೊಮ್ಮಾಯಿ ಹಾಗೂ ಮಾಜಿ ಸಚಿವರಾದ ವಿ.ಸೋಮಣ್ಣ, ಪ್ರಲ್ಹಾದ್ ಜೋಶಿ, ರಮೇಶ್ ಜಿಗಜಿಣಗಿ, ಗೋವಿಂದ ಕಾರಜೋಳ, ಪ್ರತಿಪಕ್ಷ ನಾಯಕರ ಅಶೋಕ್ ಅವರಿಗೆ ಈ ಚುನಾವಣೆ ರಾಜಕೀಯ ಬದುಕನ್ನು ನಿರ್ಧರಿಸಲಿದೆ. ಸಚಿವರಾದ ಸತೀಶ್ ಜಾರಕಿಹೊಳಿ ಹಾಗೂ ಶಿವಾನಂದ ಪಾಟೀಲ್ ಅವರಿಗೆ ಸೇರಿದಂತೆ ಕೆಲವರಿಗೆ ಈ ಚುನಾವಣೆ ಪ್ರತ್ಯಕ್ಷ ಹಾಗೂ ಪರೋಕ್ಷವಾಗಿ ರಾಜಕೀಯ ಸ್ಥಾನ ಮಾನಗಳ ಉಳಿವಿನ ಪ್ರಶ್ನೆಯಾಗಿದೆ. ಅವರೇನಾದರೂ ಸೋಲನುಭವಿಸಿದರೆ ಪಕ್ಷಗಳಲ್ಲಿ ತಮ್ಮ ರಾಜಕೀಯ ಮಹತ್ವ ಕಡಿಮೆಯಾಗಬಹುದು. ಇಲ್ಲವೇ ಮಂತ್ರಿ ಸೇರಿದಂತೆ ಉನ್ನತ ಹುದ್ದೆಗಳ ಅವಕಾಶಗಳು ಕೈ ತಪ್ಪಬಹುದು. ಇಲ್ಲವೇ ಇರುವ ಸ್ಥಾನ ಜಾರಿಹೋಗಬಹುದು ಎನ್ನುವ ಚರ್ಚೆ ನಡೆಯುತ್ತಿದೆ.

ಕರಾವಳಿಗೆ ಬಿಜೆಪಿ ಕೊಟ್ಟಿದ್ದನ್ನು ಕಾಂಗ್ರೆಸ್ ಕಿತ್ತುಕೊಂಡಿದೆ: ವಿ. ಸುನೀಲ್ ಕುಮಾರ್

ಬೆಂಗಳೂರು: ಮಂಗಳೂರಿನಲ್ಲಿ ರೋಡ್ ಶೋ ನಡೆಸಿ ಕರಾವಳಿ ಭಾಗದಲ್ಲಿ ಬಿಜೆಪಿ ಪರ ಮತ ಕೇಳಿದ ಬಗ್ಗೆ ದಕ್ಷಿಣ ಕನ್ನಡಕ್ಕೆ ಮೋದಿ ಏನು ಕೊಟ್ಟಿದ್ದಾರೆ ಎಂದು ಪ್ರಶ್ನಿಸಿದ್ದ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರಿಗೆ ಬಿಜೆಪಿ ರಾಜ್ಯ ಪ್ರಧಾನ ಕಾರ್ಯದರ್ಶಿ ಹಾಗೂ ಚುನಾವಣಾ ನಿರ್ವಹಣಾ ಸಮಿತಿ ಸಂಚಾಲಕ ವಿ.ಸುನೀಲ್ ಕುಮಾರ್ ತಿರುಗೇಟು ನೀಡಿದ್ದಾರೆ.

ಎಕ್ಸ್ ಸಾಮಾಜಿಕ ತಾಣದಲ್ಲಿ ಈ ಕುರಿತು ಮುಖ್ಯಮಂತ್ರಿಯವರಿಗೆ ಸವಾಲು ಹಾಕಿ, ಸಿದ್ದರಾಮಯ್ಯನವರೇ ದಕ್ಷಿಣ ಕನ್ನಡಕ್ಕೆ ಮೋದಿ ಏನು ಕೊಟ್ಟಿದ್ದಾರೆ ? ಎಂಬ ಪ್ರಶ್ನೆಗೆ ಉತ್ತ ಕೊಡುವುದಕ್ಕೆ ನಾವು ಸಿದ್ಧ. ಆದರೆ ಕರಾವಳಿ ಜಿಲ್ಲೆಗೆ ನಾವು ಕೊಟ್ಟಿದ್ದರ ಪೈಕಿ ನೀವು ಕಿತ್ತುಕೊಂಡ ಪಟ್ಟಿ ಎಷ್ಟು ದೊಡ್ಡದಿದೆ ಗೊತ್ತೇ ಎಂದು ಮರುಪ್ರಶ್ನೆ ಮಾಡಿದ್ದಾರೆ.

ಈ ಕುರಿತು ಪಟ್ಟಿಯೊಂದನ್ನು ಬಿಡುಗಡೆ ಮಾಡಿರುವ ಸುನೀಲ್ ಕುಮಾರ್, ಪಶ್ಚಿಮ ವಾಹಿನಿ ಯೋಜನೆಗೆ ಬಿಜೆಪಿ ಸರಕಾರ ಕೊಟ್ಟ 500 ಕೋಟಿ ರು., ಜಲಜೀವನ್ ಮಿಷನ್ ಯೋಜನೆಗೆ ಕೇಂದ್ರ ಸರಕಾರ ಕೊಡುತ್ತಿದ್ದ ಅನುದಾನದ ಮ್ಯಾಚಿಂಗ್ ಗ್ರ್ಯಾಂಟ್, ಬ್ರಹ್ಮರ್ಷಿ ನಾರಾಯಣ ಗುರು ಅಭಿವೃದ್ಧಿ ಮಂಡಳಿಗೆ ನಮ್ಮ ಸರಕಾರ ಕೊಟ್ಟ ಭರವಸೆಯ ಹಣ ಕಿತ್ತುಕೊಂಡಿದ್ದೀರಿ ಎಂದು ಆರೋಪಿಸಿದ್ದಾರೆ.

ಹೇಳುತ್ತಾ ಹೋದರೆ ಹಲವು ದೃಷ್ಟಾಂತ ಕೊಡಬಲ್ಲೆ. ಕಾಗಕ್ಕ, ಗುಬ್ಬಕ್ಕನ ಕತೆ ಹೇಳಿ ಎಷ್ಟು ದಿನ ಜನರ ದಾರಿ ತಪ್ಪಿಸುತ್ತೀರಿ? ದಕ್ಷಿಣ ಕನ್ನಡ ಜಿಲ್ಲೆಯೂ ಸೇರಿದಂತೆ ಸಮಗ್ರ ಕರಾವಳಿ ಜಿಲ್ಲೆಗಳು ನಿಜವಾದ ಅರ್ಥದಲ್ಲಿ ಅಭಿವೃದ್ಧಿ ಕಂಡಿದ್ದು ಬಿಜೆಪಿ ಕಾಲದಲ್ಲಿ ಎಂದು ಎದೆ ತಟ್ಟಿ ಹೇಳುತ್ತೇನೆ. ಈ ಬಗ್ಗೆ ಬೇಕಾದರೆ ಬಹಿರಂಗ ಚರ್ಚೆಗೆ ಸಿದ್ಧ. ನೀವು ಕೊಟ್ಟ ಕೊಡುಗೆ ಕುಕ್ಕರ್ ಬಾಂಬ್ ಬ್ರದರ್ಸ್‌ಗಳಿಗೆ ಮಾತ್ರ ಎಂದು ಕಿಡಿ ಕಾರಿದ್ದಾರೆ.

ಶಾಂತಿ-ಸುವ್ಯವಸ್ಥೆ ಇಲ್ಲ

ಬಂಟರ ಅಭಿವೃದ್ಧಿ ನಿಗಮ ಸ್ಥಾಪನೆ ಮಾಡುತ್ತೇವೆಂಬ ಮಾತು ಕೊಟ್ಟು ಕಿತ್ತುಕೊಂಡಿರಿ. ದಕ್ಷಿಣ ಕನ್ನಡ ಜಿಲ್ಲೆಯಲ್ಲಿ ಒಂದೇ ಒಂದು ರಸ್ತೆ ಅಭಿವೃದ್ಧಿ ಮಾಡದೇ ಡಾಂಬರೀಕರಣ ಕಿತ್ತುಕೊಂಡಿರಿ. ಕರಾವಳಿಯ ದೇಗುಲ ಹಾಗೂ ಭಜನಾ ಮಂದಿರಗಳಿಗೆ ನಮ್ಮ ಸರಕಾರ ಕೊಡುತ್ತಿದ್ದ ಅನುದಾನ ಕಿತ್ತುಕೊಂಡಿರಿ. ಬಂದರು ಅಭಿವೃದ್ಧಿಯ ಕನಸು ಕಿತ್ತುಕೊಂಡಿರಿ. ನಾವು ನಿಗ್ರಹಿಸಿ ಮಟ್ಟ ಹಾಕಿದ್ದ ನಕ್ಸಲರ ನೆಂಟರಿಗೆ ನಿಮ್ಮ ಕಚೇರಿಯ ಸುತ್ತಮುತ್ತ ಆಶ್ರಯಕೊಟ್ಟು ದಕ್ಷಿಣ ಕನ್ನಡದ ಶಾಂತಿ-ಸುವ್ಯವಸ್ಥೆ ಕಿತ್ತುಕೊಂಡಿರಿ ಎಂದು ಚುನಾವಣಾ ನಿರ್ವಹಣಾ ಸಮಿತಿ ಸಂಚಾಲಕ ವಿ.ಸುನೀಲ್ ಕುಮಾರ್ ದೂರಿದ್ದಾರೆ.

ಚುನಾವಣೆ ಪ್ರಜಾಪ್ರಭುತ್ವದ ಉತ್ಸವ: ಹೊರಟ್ಟಿ

ಬೆಂಗಳೂರು: ಪ್ರಜಾಪ್ರಭುತ್ವ ಉಳಿಸಲು, ಬೆಳೆಸಲು ಪ್ರತಿಯೊಬ್ಬರೂ ಮತದಾನದಲ್ಲಿ ಪಾಲ್ಗೊಂಡು ಪ್ರಜಾಪ್ರಭುತ್ವ ಯಶಸ್ವಿಗೊಳಿಸಬೇಕು ಎಂದು ವಿಧಾನಪರಿಷತ್ ಸಭಾಪತಿ ಬಸವರಾಜ ಹೊರಟ್ಟಿ ಹೇಳಿದ್ದಾರೆ.

ವಿಧಾನಸೌಧದ ಮುಂಭಾಗದಲ್ಲಿ ದಿ.ಬೆಂಗಳೂರು ಸಿಟಿ ಕಾರ್ಪೊರೇಷನ್ ವರ್ಕರ್ಸ್ ಫೆಡರೇಷನ್‌ನಿಂದ ಸಂವಿಧಾನ ಶಿಲ್ಪಿ ಡಾ.ಬಿ.ಆರ್.ಅಂಬೇಡ್ಕರ್ ಅವರ 133ನೇ ಜನ್ಮದಿನಾಚರಣೆ ಅಂಗವಾಗಿ ಸಂವಿಧಾನ ಶಿಲ್ಪಿ ಪ್ರತಿಮೆಗೆ ಪುಷ್ಪನಮನ ಸಲ್ಲಿಸಿ ಮತದಾರರ ಜಾಗೃತಿ ಮತ್ತು ಬೈಕ್ ಜಾಥ ಉದ್ಘಾಟಿಸಿ ಮಾತನಾಡಿದ ಅವರು, ಚುನಾವಣೆ ಪ್ರಜಾಪ್ರಭುತ್ವದ ಹಬ್ಬ. ಚುನಾವಣೆ ಜನೋತ್ಸವವಾಗಿದ್ದು, ಪ್ರತಿಯೊಬ್ಬರೂ ಈ ಉತ್ಸವದಲ್ಲಿ ಭಾಗವಹಿಸಬೇಕು ಎಂದರು.

ದಿ.ಬೆಂಗಳೂರು ಸಿಟಿ ಕಾರ್ಪೋರೇಷನ್ ವರ್ಕರ್ಸ್ ಫೆಡರೇಷನ್ ಅಧ್ಯಕ್ಷ ಡಾ.ಬಾಬು ಮಾತನಾಡಿ, ದೇಶದಲ್ಲಿ ಪ್ರತಿಯೊಬ್ಬ ನಾಗರಿಕ ಸರಿಸಮಾನವಾಗಿ ಬಾಳಿ ಬದುಕಲು ಸಂವಿಧಾನ ಎಂಬ ಪವಿತ್ರಗ್ರಂಥ ನಮಗೆ ಕೊಡುಗೆಯಾಗಿದೆ. ಅದರಲ್ಲೂ ಸಂವಿಧಾನ ರಚನಾ ಸಮಿತಿ ಅಧ್ಯಕ್ಷ ಡಾ.ಬಿ.ಆರ್. ಅಂಬೇಡ್ಕರ್ ಕೊಡುಗೆ ಅನನ್ಯ. ವಿಶ್ವದಲ್ಲೇ ಅತ್ಯಂತ ಶ್ರೇಷ್ಠ ಸಂವಿಧಾನವನ್ನು ಅಂಬೇಡ್ಕರ್ ನೀಡಿದ್ದಾರೆ. ಅದರಲ್ಲಿ ಉತ್ತಮ ಸರಕಾರ, ಉತ್ತಮ ರಾಜಕಾರಣಿ ಆಯ್ಕೆ ಮಾಡಲು ಮತದಾನದ ಹಕ್ಕನ್ನು ಪ್ರತಿಯೊಬ್ಬ ನಾಗರಿಕರಿಗೂ ನೀಡಿದ್ದಾರೆ. ಪ್ರಜಾಪ್ರಭುತ್ವ ರಾಷ್ಟ್ರದಲ್ಲಿ ಮತದಾನ ಮಾಡುವ ಮೂಲಕ ಉತ್ತಮ ಜನಪ್ರತಿನಿಧಿಯನ್ನು ಆಯ್ಕೆ ಮಾಡಬೇಕು ಎಂದರು.

ಮತದಾರರ ಜಾಗೃತಿ ಜಾಥವು ವಿಧಾನಸೌಧ ಮುಭಾಗದಿಂದ ಆರಂಭವಾಗಿ ಬಿಬಿಎಂಪಿ ಮತ್ತು ಪುರಭವನ, ಕೆ.ಆರ್.ಮಾರುಕಟ್ಟೆ, ಜಗಜೀವನ್ ರಾಮ್ ನಗರ, ಕ್ವೀನ್ಸ್ ರಸ್ತೆ ಚಿನ್ನಸ್ವಾಮಿ ಸ್ಟೇಡಿಯಂ, ಎಂ.ಜಿ.ರಸ್ತೆ, ಕೋರಮಂಗಲ, ಕಂಠೀರವ ಕ್ರೀಡಾಂಗಣದ ಮೂಲಕ ಬಿಬಿಎಂಪಿ ಕೇಂದ್ರ ಕಚೇರಿಗೆ ತಲುಪಿತು.

ಮತದಾರರ ಜಾಗೃತಿ ಜಾಥಾಗೆ ಸಭಾಪತಿ ಬಸವರಾಜ ಹೊರಟ್ಟಿ ಚಾಲನೆ ನೀಡಿದರು. ದಿ.ಬೆಂಗಳೂರು ಸಿಟಿ ಕಾರ್ಪೋರೇಷನ್ ವರ್ಕರ್ಸ್ ಫೆಡರೇಷನ್ ಅಧ್ಯಕ್ಷ ಡಾ. ಬಾಬು, ಪೌರಕಾರ್ಮಿಕ ಮುಖಂಡರಾದ ಸುಬ್ಬರಾಯಪ್ಪ, ಭೀಮಜೋಶಿ ಶ್ರೀನಿವಾಸ್, ಸಿ.ಎಂ. ವೆಂಕಟೇಶ್ ಮತ್ತಿತರರು ಇದ್ದರು.

ಚುನಾವಣಾ ಆಯೋಗಕ್ಕೆ ಅಭ್ಯರ್ಥಿಗಳು ಸಲ್ಲಿಸಿದ ಚುನಾವಣಾ ವೆಚ್ಚದ ವರದಿ | ಖೂಬಾ ಅತಿ ಕಡಿಮೆ, ಶೋಭಾ ಕರಂದ್ಲಾಜೆಯಿಂದ ಅತಿ ಹೆಚ್ಚು ವೆಚ್ಚ

2019ರಲ್ಲಿ ಪ್ರತಿ ಅಭ್ಯರ್ಥಿಯ ಚುನಾವಣಾ ವೆಚ್ಚ ₹49.07 ಲಕ್ಷ ಮಾತ್ರ!

ಬೆಂಗಳೂರು: ಚುನಾವಣೆಗಳಲ್ಲಿ ರಾಜಕೀಯ ಪಕ್ಷಗಳ ಅಭ್ಯರ್ಥಿಗಳು ಮಾಡುವ ವೆಚ್ಚ ಕೃಷ್ಣನ ಲೆಕ್ಕವಾದರೆ, ತೋರಿಸುವ ವೆಚ್ಚ ರಾಮನ ಲೆಕ್ಕ. ಆದರೆ, ಕೃಷ್ಣನ ವೆಚ್ಚಕ್ಕೆ ಲೆಕ್ಕ ಇಲ್ಲದ ಕಾರಣ, ರಾಮನ ಲೆಕ್ಕವನ್ನೇ ಚುನಾವಣಾ ಆಯೋಗ ಒಪ್ಪಿಕೊಳ್ಳುತ್ತದೆ.

2019ರ ಲೋಕಸಭೆ ಚುನಾವಣೆಯಲ್ಲಿ ಪಕ್ಷಗಳ ಅಭ್ಯರ್ಥಿಗಳು ಎಷ್ಟು ವೆಚ್ಚ ಮಾಡಿದ್ದಾರೆ ಎಂದರೆ ಅದಕ್ಕೆ ಲೆಕ್ಕ ತೋರಿಸಲು ಸಾಧ್ಯವೇ ಇಲ್ಲ, ಪ್ರತಿಷ್ಠೆಗೆ ಬಿದ್ದು ಕೋಟಿ ಕೋಟಿ ವೆಚ್ಚ ಮಾಡಿದರೂ ಚುನಾವಣಾ ಆಯೋಗಕ್ಕೆ ಕೊಟ್ಟಿರುವುದು ಮಾತ್ರ ಲಕ್ಷಗಳಲ್ಲಿ. ಆ ವೇಳೆ ಒಬ್ಬ ಅಭ್ಯರ್ಥಿಗೆ ಗರಿಷ್ಠ 70 ಲಕ್ಷ ರು. ವೆಚ್ಚ ಮಿತಿ ನಿಗದಿ ಮಾಡಲಾಗಿತ್ತಾದರೂ ಯಾರೊಬ್ಬರೂ ಇದನ್ನು ತಲುಪಿಲ್ಲ.

ಚುನಾವಣಾ ಆಯೋಗದಲ್ಲಿ ಲಭ್ಯ ಅಂಕಿ-ಅಂಶಗಳ ಪ್ರಕಾರ 2019ರಲ್ಲಿ ಲೋಕಸಭೆ ಚುನಾವಣೆಯಲ್ಲಿ ಗೆದ್ದ 28 ಅಭ್ಯರ್ಥಿಗಳು ಮಾಡಿದ ಒಟ್ಟು ವೆಚ್ಚ 13.74 ಕೋಟಿ ರು. ಅಂದರೆ, ಒಬ್ಬ ಅಭ್ಯರ್ಥಿಯ ಸರಾಸರಿ ವೆಚ್ಚ 49.07 ಲಕ್ಷ ರು. ಮಾತ್ರ. ಬಿಜೆಪಿಯ 25 ಸಂಸದರು ಸೇರಿ ಒಟ್ಟಾರೆ 12.23 ಕೋಟಿ ರು. ವೆಚ್ಚ ಮಾಡಿದ್ದರೆ, ಕಾಂಗ್ರೆಸ್‌ನ ಒಬ್ಬ ಸಂಸದ 38.38 ಲಕ್ಷ ರು., ಜೆಡಿಎಸ್‌ನ ಒಬ್ಬ ಸಂಸದ 63.14 ಲಕ್ಷ ರು. ಮತ್ತು ಪಕ್ಷೇತರ ಸಂಸದೆ 49.70 ಲಕ್ಷ ರು. ಚುನಾವಣೆಗಾಗಿ ಖರ್ಚು ಮಾಡಿದ್ದಾರೆ.

ಖೂಬಾ ಖರ್ಚು ಮಾಡಿದ್ದು 25.15 ಲಕ್ಷ ರು. ಮಾತ್ರ

2019ರ ಚುನಾವಣೆಯಲ್ಲಿ ಅತಿ ಕಡಿಮೆ ಖರ್ಚು ಮಾಡಿದವರು ಕೇಂದ್ರ ಸಚಿವ, ಬೀದರ್ ಸಂಸದ ಭಗವಂತ ಖೂಬಾ. ತಮ್ಮ ಚುನಾವಣಾ ಪ್ರಚಾರಕ್ಕೆ ಅವರು ಖರ್ಚು ಮಾಡಿದ್ದು ಕೇವಲ 25.15 ಲಕ್ಷ ರು. ಮಾತ್ರ. ಉಳಿದಂತೆ ಶಿವಮೊಗ್ಗ ಸಂಸದ ಬಿ.ವೈ.ರಾಘವೇಂದ್ರ (33.43 ಲಕ್ಷ ರು.) ಹಾಗೂ ಬೆಂಗಳೂರು ಗ್ರಾಮಾಂತರ ಸಂಸದ ಡಿ.ಕೆ.ಸುರೇಶ್ (38.38 ಲಕ್ಷ ರು.) ಅತಿ ಕಡಿಮೆ ವೆಚ್ಚ ಮಾಡಿರುವ ಇತರೆ ಇಬ್ಬರು ಸಂಸದರು. ಇನ್ನು ಅತಿ ಹೆಚ್ಚು ವೆಚ್ಚ ಮಾಡಿದವರಲ್ಲಿ ಕೇಂದ್ರ ಸಚಿವೆ, ಉಡುಪಿ-ಚಿಕ್ಕಮಗಳೂರು ಕ್ಷೇತ್ರದ ಬಿಜೆಪಿ ಸಂಸದೆ ಶೋಭಾ ಕರಂದ್ಲಾಜೆ ಮೊದಲ ಸ್ಥಾನದಲ್ಲಿದ್ದಾರೆ. ಅವರು ಚುನಾವಣೆಗೆ ಒಟ್ಟಾರೆ 66.46 ಲಕ್ಷ ರು. ವೆಚ್ಚ ಮಾಡಿದ್ದರು. 2ನೇ ಸ್ಥಾನದಲ್ಲಿರುವ ಹಾಸನದ ಜೆಡಿಎಸ್ ಸಂಸದ ಪ್ರಜ್ವಲ್ ರೇವಣ್ಣ 63.14 ಲಕ್ಷ ರು. ವೆಚ್ಚ ಮಾಡಿದ್ದರೆ, ಮೂರನೇ ಸ್ಥಾನದಲ್ಲಿರುವ ಮೈಸೂರು ಸಂಸದ ಪ್ರತಾಪ್ ಸಿಂಹ 60.95 ಲಕ್ಷ ರು. ವೆಚ್ಚ ಮಾಡಿದ್ದರು.

ಪಕ್ಷಗಳ ಚುನಾವಣಾ ವೆಚ್ಚ 50 ಕೋಟಿ ದಾಟಿಲ್ಲ

ಇನ್ನು ತಾರಾ ಪ್ರಚಾರಕರು, ರಾಷ್ಟ್ರೀಯ ನಾಯಕರ ಪ್ರಚಾರಕ್ಕಾಗಿ ರಾಜಕೀಯ ಪಕ್ಷಗಳು ಮಾಡುವ ವೆಚ್ಚ, ಜಾಹೀರಾತು, ಸಾರ್ವಜನಿಕ ಸಭೆ, ರೋಡ್‌ಶೋ ಪ್ರಚಾರಕ್ಕಾಗಿ ಬಿಜೆಪಿ 18.44 ಕೋಟಿ ರು. ವೆಚ್ಚ ಮಾಡಿದ್ದರೆ, ಕಾಂಗ್ರೆಸ್, 25.04 ಕೋಟಿ ರು. ವೆಚ್ಚ ಮಾಡಿದೆ.

ಪ್ರಚಾರ, ರ‍್ಯಾಲಿ, ಸಾರ್ವಜನಿಕ ಸಭೆ, ರೋಡ್ ಶೋ, ಮಾಧ್ಯಮ ಜಾಹೀರಾತು, ಹೋರ್ಡಿಂಗ್ಸ್, ಫ್ಲೆಕ್ಸ್, ಕರಪತ್ರ ಹಾಗೂ ತನ್ನ 27 ಅಭ್ಯರ್ಥಿಗಳಿಗೆ ಬಿಜೆಪಿ ಒಟ್ಟು 18,44,72,327 ಕೋಟಿ ರು. ವೆಚ್ಚ ಮಾಡಿದೆ. ಅಭ್ಯರ್ಥಿಗಳಿಗೆ ತಲಾ 40 ಲಕ್ಷ ರು.ನಂತೆ ಒಟ್ಟು 10.80 ಕೋಟಿ ರೂ. ಹಣ ಪಾವತಿಸಿತ್ತು. ಸ್ಟಾರ್ ಪ್ರಚಾರಕರ ಪ್ರಯಾಣದ ವೆಚ್ಚವಾಗಿ 2.46 ಲಕ್ಷ ರು., ಇತರ ಬಿಜೆಪಿ ನಾಯಕರ ಪ್ರಯಾಣಕ್ಕಾಗಿ 35.24 ಲಕ್ಷ ರು. ಮಾಧ್ಯಮಗಳಲ್ಲಿನ ಪ್ರಚಾರ ಜಾಹೀರಾತಿಗಾಗಿ 5.03 ಕೋಟಿ ರು., ಹೋರ್ಡಿಂಗ್ಸ್, ಫ್ಲೆಕ್ಸ್, ಧ್ವಜ, ಕರಪತ್ರಗಳಿಗೆ 39.39 ಲಕ್ಷ ರು., ಪ್ರಚಾರ ಸಭೆ, ರ‍್ಯಾಲಿ, ಮೆರವಣಿಗೆಗಳಿಗೆ 1.55 ಕೋಟಿ ರು. ಹಾಗೂ ಇತರೆ ವೆಚ್ಚವಾಗಿ 27.74 ಲಕ್ಷ ರು. ಖರ್ಚು ಮಾಡಿದೆ.

ಇನ್ನು ಒಟ್ಟು 25.04 ಕೋಟಿ ರು. ವೆಚ್ಚ ಮಾಡಿರುವ ಕಾಂಗ್ರೆಸ್, ಸ್ಟಾರ್ ಪ್ರಚಾರಕರ ಪ್ರಯಾಣದ ವೆಚ್ಚವಾಗಿ 5.54 ಕೋಟಿ ರು., ಇತರ ಕಾಂಗ್ರೆಸ್ ನಾಯಕರ ಪ್ರಯಾಣ ವೆಚ್ಚವಾಗಿ 6.36 ಲಕ್ಷ ರು., ಚುನಾವಣಾ ಪ್ರಚಾರದ ಮಾಧ್ಯಮ ಜಾಹೀ ರಾತುಗಳಿಗಾಗಿ 17.32 ಕೋಟಿ ರು., ಹೋರ್ಡಿಂಗ್ಸ್, ಧ್ವಜ, ಬಂಟ್ಟಿಗ್ಸ್, ಫ್ಲೆಕ್ಸ್, ಕರಪತ್ರಗಳಿಗೆ 2.10 ಕೋಟಿ ರು. ಖರ್ಚು ಮಾಡಿತ್ತು.

ನಿಧಿ ಸಂಗ್ರಹದಲ್ಲಿ ಬಿಜೆಪಿ ಮುಂದು

2019ರಲ್ಲಿ ಲೋಕಸಭೆ ಚುನಾವಣೆ ಘೋಷಣೆಯಾದಾಗಿನಿಂದ ಚುನಾವಣೆ ಪ್ರಕ್ರಿಯೆ ಮುಕ್ತಾಯದವರೆಗೆ ರಾಜ್ಯ ಕಾಂಗ್ರೆಸ್ ನಗದು ರೂಪದಲ್ಲಿ 3.78 ಕೋಟಿ ರು., ಚೆಕ್, ಡಿಡಿ ಮೂಲಕ ರಾಜ್ಯ ಕಾಂಗ್ರೆಸ್ 18.80 ಕೋಟಿ ರು. ಸೇರಿ ಒಟ್ಟು 22.58 ಕೋಟಿ ರು. ನಿಧಿ ಸಂಗ್ರಹ ಮಾಡಿದ್ದರೆ, ಬಿಜೆಪಿ ನಗದು ರೂಪದಲ್ಲಿ 1 ಕೋಟಿ ರು., ಚೆಕ್, ಡಿಡಿ ಮೂಲಕ 42.93 ಕೋಟಿ ರು. ಸಂಗ್ರಹಿಸಿದೆ ಎಂದು ಚುನಾವಣಾ ಆಯೋಗಕ್ಕೆ ಸಲ್ಲಿಸಿರುವ ವರದಿಯಲ್ಲಿ ತಿಳಿಸಲಾಗಿದೆ.

ಈ ಬಾರಿಯ ವೆಚ್ಚ ಎಷ್ಟು?

2024ರ ಲೋಕಸಭೆ ಚುನಾವಣೆಗೆ ಅಭ್ಯರ್ಥಿಗಳು ಮಾಡಬಹುದಾದ ವೆಚ್ಚ ಮಿತಿಯನ್ನು ಚುನಾವಣಾ ಆಯೋಗ ಹೆಚ್ಚಿಸಿದ್ದು, ಪ್ರತಿ ಅಭ್ಯರ್ಥಿ ನಾಮಪತ್ರ ಸಲ್ಲಿಸಿದಾಗಿನಿಂದ ಚುನಾವಣಾ ಪ್ರಕ್ರಿಯೆ ಮುಕ್ತಾಯವಾಗುವವರೆಗೆ 95 ಕೋಟಿ ರು. ವೆಚ್ಚ ಮಾಡಬಹುದು. ಇದರ ಜತೆಗೆ ಪಕ್ಷಗಳೂ ಚುನಾವಣಾ ರ‍್ಯಾಲಿ, ಸಭೆ, ಜಾಹೀರಾತು, ಹೋರ್ಡಿಂಗ್ಸ್, ಕರಪತ್ರ, ಫ್ಲೆಕ್ಸ್, ಪ್ರಚಾರ ವಸ್ತುಗಳು, ಸ್ಟಾರ್ ಪ್ರಚಾರಕರ ವೆಚ್ಚ ಹಾಗೂ ಇತರ ಚುನಾವಣಾ ಸಂಬಂಧಿತ ಕೆಲಸಗಳಿಗಾಗಿ ವೆಚ್ಚ ಮಾಡಲು ಅವಕಾಶವಿದೆ.

ಮಾನ್ಯ ಪ್ರಧಾನ ಸಿವಿಲ್ ನ್ಯಾಯಾಧೀಶರ ಮತ್ತು ಜೆ.ಎಂ.ಎಫ್.ಸಿ., ನ್ಯಾಯಾಲಯ, ಕನಕಪುರ
ಸಿ.ಮಿಸ್.ನಂ. 254/2024

ಅರ್ಜಿದಾರರು: ಶ್ರೀಮತಿ ಮಹದೇವಮ್ಮ ಬಿನ್ ಲೇಟ್ ಬಸವೇಗೌಡ ವಯಸ್ಸು 82 ವರ್ಷ ವಾಸ: ಅಂಬೇಡ್ಕರ್ ನಗರ ಶ್ರೀರಾಮಪುರ ಕನಕಪುರ ಟೌನ್, ಕನಕಪುರ ತಾಲ್ಲೂಕು, ರಾಮನಗರ ಜಿಲ್ಲೆ. ಮತ್ತು ಇತರರು.

ವಿರುದ್ಧ

ಪ್ರತಿ ಅರ್ಜಿದಾರರು: 1. ಜನನ ಮತ್ತು ಮರಣ ನೊಂದಣಿ ಅಧಿಕಾರಿಗಳುನಗರ ಸಭೆ ಕನಕಪುರ, ಕನಕಪುರ ತಾಲ್ಲೂಕು, ರಾಮನಗರ ಜಿಲ್ಲೆ

ಪ್ರಕಟಣೆ

ಮೇಲ್ಕಾಣಿಸಿರುವ ಅರ್ಜಿದಾರರು ಈ ಮೂಲಕ ತಿಳಿಯಪಡಿಸುವುದೇನೆಂದರೆ, 1 ಮತ್ತು 2ನೇ ಅರ್ಜಿದಾರರ ತಂದೆ, 3ನೇ ಅರ್ಜಿದಾರರ ಮಾವ ಮತ್ತು 4 ಮತ್ತು 5ನೇ ಅರ್ಜಿದಾರರ ತಾತನವರಾದ ಬಸವೇಗೌಡ ಬಿನ್ ಲೇಟ್ ಈರೇಗೌಡ ರವರು, ರಾಮನಗರ ಜಿಲ್ಲೆ, ಕನಕಪುರ ತಾಲ್ಲೂಕು, ಕನಕಪುರ ಟೌನ್, ಅಂಬೇಡ್ಕರ್‌ನಗರ ನಂ. 151ರಲ್ಲಿ ದಿನಾಂಕ 03.04.2009 ರಂದು ಮರಣ ಹೊಂದಿದ್ದು, ಇವರ ಮರಣ ಪ್ರಮಾಣ ಪತ್ರವನ್ನು ನೀಡುವಂತೆ ಎದುರುದಾರರಿಗೆ ನಿರ್ದೇಶನ ನೀಡುವಂತೆ ಹಾಗೂ ನ್ಯಾಯಾಲಯದ ಆದೇಶವನ್ನು ಕೋರಿ ಈ ಪ್ರಕರಣವನ್ನು ಸಲ್ಲಿಸಿದ್ದು, ಇವರ ಮರಣ ದಿನಾಂಕದ ಬಗ್ಗೆ ಯಾರದಾದರೂ ತಕರಾರು ಇದ್ದರೆ ಖುದ್ದಾಗಿ ಆಗಲಿ ಅಥವಾ ಅಧಿಕಾರ ಕೊಟ್ಟ ವಕೀಲರ ಮುಖಾಂತರವಾಗಲೀ ನ್ಯಾಯಾಲಯ ನಿಗಧಿಪಡಿಸಿದ ದಿನಾಂಕದಂದು ಅಂದರೆ, 29.05.2024 ರ ಬೆಳಿಗ್ಗೆ ಸರಿಯಾಗಿ 11=00 ಘಂಟೆಗೆ ನ್ಯಾಯಾಲಯದ ಮುಂದೆ ಹಾಜರಾಗಿ ತಕರಾರು ಸಲ್ಲಿಸತಕ್ಕದ್ದು, ತಪ್ಪಿದಲ್ಲಿ ಯಾರದ್ದೂ ತಕರಾರೂ ಇಲ್ಲವೆಂದು ಪರಿಗಣಿಸಿ ಉಲ್ಲೇಖಿತ ಪ್ರಕರಣವನ್ನು ಏಕಪಕ್ಷೀಯವಾಗಿ ಇತ್ಯರ್ಥಗೊಳಿಸಲಾಗುವುದು.

2024ರ ಏಪ್ರಿಲ್ 8ನೇ ತಾರೀಖು ಈ ದಿವಸ ನನ್ನ ಸಹಿ ಮತ್ತು ನ್ಯಾಯಾಲಯದ ಮೊಹರಿನೊಂದಿಗೆ ಹೊರಡಿಸಲಾಗಿದೆ.

ಮಾನ್ಯ ನ್ಯಾಯಾಲಯದ ಆದೇಶದ ಮೇರೆಗೆ
ಶಿರಸ್ತೇದಾರರು,
ಮಾನ್ಯ ಪ್ರಧಾನ ಸಿವಿಲ್ ನ್ಯಾಯಾಧೀಶರು ಜೆ.ಎಂ.ಎಫ್.ಸಿ. ನ್ಯಾಯಾಲಯ, ಕನಕಪುರ

ಅರ್ಜಿದಾರರ ಪರ ವಕೀಲರು
ವಕೀಲರು, ಕನಕಪುರ
ವಿ.ಆರ್.ಪ್ರದೀಪ್
ಸ್ಥಳ : ಕನಕಪುರ
ದಿನಾಂಕ:

ಮಾನ್ಯ ಪ್ರಧಾನ ಸಿವಿಲ್ ನ್ಯಾಯಾಧೀಶರ ಮತ್ತು ಜೆ.ಎಂ.ಎಫ್.ಸಿ., ನ್ಯಾಯಾಲಯ, ಕನಕಪುರ
ಸಿ.ಮಿಸ್.ನಂ. 291/2024

ಅರ್ಜಿದಾರರು: ಶ್ರೀಮತಿ ಗೀತಾ ಬಿನ್ ಲೇಟ್ ವೆಂಟಕರಮಣ @ ಕುಂಜೀರಯ್ಯ @ ವೆಂಕಟಪ್ಪ ಕೋಂ ಸಿದ್ದರಾಜು ಎಂ. ವಯಸ್ಸು 35 ವರ್ಷ ವಾಸ: ತಮ್ಮನಾಯಕನಹಳ್ಳಿ ಗ್ರಾಮ, ಕೆ.ಪಿ.ದೊಡ್ಡಿ ಅಂಚೆ, ಕೈಲಂಚ ಹೋಬಳಿ ರಾಮನಗರ ತಾಲ್ಲೂಕು, ರಾಮನಗರ ಜಿಲ್ಲೆ. ಮತ್ತು ಇತರರು.

ವಿರುದ್ಧ

ಪ್ರತಿ ಅರ್ಜಿದಾರರು: 1. ಜನನ ಮತ್ತು ಮರಣ ನೊಂದಣಿ ಅಧಿಕಾರಿಗಳು, ತಹಶೀಲ್ದಾರ್ ಕನಕಪುರ, ಕನಕಪುರ ತಾಲ್ಲೂಕು, ರಾಮನಗರ ಜಿಲ್ಲೆ. 2. ಗ್ರಾಮ ಲೆಕ್ಕಾಧಿಕಾರಿಗಳು, ಮೇಡಮಾರನಹಳ್ಳಿ ವೃತ್ತ ಹಾರೋಹಳ್ಳಿ ಹೋಬಳಿ, ಹಾರೋಹಳ್ಳಿ ತಾಲ್ಲೂಕು, ರಾಮನಗರ ಜಿಲ್ಲೆ.

ಪ್ರಕಟಣೆ

ಮೇಲ್ಕಾಣಿಸಿರುವ ಅರ್ಜಿದಾರರು ಈ ಮೂಲಕ ತಿಳಿಯಪಡಿಸುವುದೇನೆಂದರೆ, 1 ಮತ್ತು 4 ರಿಂದ 8ನೇ ಅರ್ಜಿದಾರರ ಅಜ್ಜ, 2 ಮತ್ತು 3ನೇ ಅರ್ಜಿದಾರರ ತಾಯಿಯವರಾದ ನಿಂಗಮ್ಮ ಕೋಂ ಲೇಟ್ ಬುಡ್ಡವೆಂಕಟಯ್ಯ ರವರು, ರಾಮನಗರ ಜಿಲ್ಲೆ, ಹಾರೋಹಳ್ಳಿ ತಾಲ್ಲೂಕು, ಹಾರೋಹಳ್ಳಿ ಹೋಬಳಿ, ಮೇಡಮಾರನಹಳ್ಳಿ ಗ್ರಾಮದಲ್ಲಿ ದಿನಾಂಕ 06.04.1982 ರಂದು ಮರಣ ಹೊಂದಿದ್ದು, ಇವರ ಮರಣ ಪ್ರಮಾಣ ಪತ್ರವನ್ನು ನೀಡುವಂತೆ ಎದುರುದಾರರಿಗೆ ನಿರ್ದೇಶನ ನೀಡುವಂತೆ ಹಾಗೂ ನ್ಯಾಯಾಲಯದ ಆದೇಶವನ್ನು ಕೋರಿ ಈ ಪ್ರಕರಣವನ್ನು ಸಲ್ಲಿಸಿದ್ದು, ಇವರ ಮರಣ ದಿನಾಂಕದ ಬಗ್ಗೆ ಯಾರದಾದರೂ ತಕರಾರು ಇದ್ದರೆ ಖುದ್ದಾಗಿ ಆಗಲಿ ಅಥವಾ ಅಧಿಕಾರ ಕೊಟ್ಟ ವಕೀಲರ ಮುಖಾಂತರವಾಗಲೀ ನ್ಯಾಯಾಲಯ ನಿಗಧಿಪಡಿಸಿದ ದಿನಾಂಕದಂದು ಅಂದರೆ, 23.05.2024ರ ಬೆಳಿಗ್ಗೆ ಸರಿಯಾಗಿ 11=00 ಘಂಟೆಗೆ ನ್ಯಾಯಾಲಯದ ಮುಂದೆ ಹಾಜರಾಗಿ ತಕರಾರು ಸಲ್ಲಿಸತಕ್ಕದ್ದು, ತಪ್ಪಿದಲ್ಲಿ ಯಾರದ್ದೂ ತಕರಾರೂ ಇಲ್ಲವೆಂದು ಪರಿಗಣಿಸಿ ಉಲ್ಲೇಖಿತ ಪ್ರಕರಣವನ್ನು ಮುಂದುವರೆಸಿ ಇತ್ಯರ್ಥಗೊಳಿಸಲಾಗುವುದು.

2024ರ ಏಪ್ರಿಲ್ 08ನೇ ತಾರೀಖು ಈ ದಿವಸ ನನ್ನ ಸಹಿ ಮತ್ತು ನ್ಯಾಯಾಲಯದ ಮೊಹರಿನೊಂದಿಗೆ ಹೊರಡಿಸಲಾಗಿದೆ.

ಮಾನ್ಯ ನ್ಯಾಯಾಲಯದ ಆದೇಶದ ಮೇರೆಗೆ
ಶಿರಸ್ತೇದಾರರು,
ಮಾನ್ಯ ಪ್ರಧಾನ ಸಿವಿಲ್ ನ್ಯಾಯಾಧೀಶರು ಜೆ.ಎಂ.ಎಫ್.ಸಿ. ನ್ಯಾಯಾಲಯ, ಕನಕಪುರ

ಅರ್ಜಿದಾರರ ಪರ ವಕೀಲರು
ಶ್ರೀಕಂಠ.ಎನ್ ಮತ್ತು ವಿದ್ಯಾಶ್ರೀ ಜೆ.
ವಕೀಲರು, ಕನಕಪುರ
ದಿನಾಂಕ:

ಮಾನ್ಯ ಪ್ರಧಾನ ಸಿವಿಲ್ ನ್ಯಾಯಾಧೀಶರ ಮತ್ತು ಜೆ.ಎಂ.ಎಫ್.ಸಿ., ನ್ಯಾಯಾಲಯ, ಕನಕಪುರ
ಸಿ.ಮಿಸ್.ನಂ. 290/2024

ಅರ್ಜಿದಾರರು: ಶ್ರೀಮತಿ ವೆಂಕಟಲಕ್ಷ್ಮಮ್ಮ ಕೋಂ ಲೇಟ್ ರವಿಚಂದ್ರನ್ ವಯಸ್ಸು 60 ವರ್ಷ ವಾಸ: ಮೇಡಮಾರನಹಳ್ಳಿ ಗ್ರಾಮ, ಹಾರೋಹಳ್ಳಿ ಹೋಬಳಿ, ಹಾರೋಹಳ್ಳಿ ತಾಲ್ಲೂಕು, ರಾಮನಗರ ಜಿಲ್ಲೆ. ಮತ್ತು ಇತರರು.

ವಿರುದ್ಧ

ಪ್ರತಿ ಅರ್ಜಿದಾರರು: 1. ಜನನ ಮತ್ತು ಮರಣ ನೊಂದಣಿ ಅಧಿಕಾರಿಗಳು, ತಹಶೀಲ್ದಾರ್ ಕನಕಪುರ, ಕನಕಪುರ ತಾಲ್ಲೂಕು, ರಾಮನಗರ ಜಿಲ್ಲೆ. 2. ಗ್ರಾಮ ಲೆಕ್ಕಾಧಿಕಾರಿಗಳು, ಮೇಡಮಾರನಹಳ್ಳಿ ವೃತ್ತ ಹಾರೋಹಳ್ಳಿ ಹೋಬಳಿ, ಹಾರೋಹಳ್ಳಿ ತಾಲ್ಲೂಕು, ರಾಮನಗರ ಜಿಲ್ಲೆ.

ಪ್ರಕಟಣೆ

ಮೇಲ್ಕಾಣಿಸಿರುವ ಅರ್ಜಿದಾರರು ಈ ಮೂಲಕ ತಿಳಿಯಪಡಿಸುವುದೇನೆಂದರೆ, 1 ಮತ್ತು 2ನೇ ಅರ್ಜಿದಾರರ ತಂದೆ, 3 ರಿಂದ 8ನೇ ಅರ್ಜಿದಾರರ ತಾತನವರಾದ ಬುಡ್ಡವೆಂಕಟಯ್ಯ ಬಿನ್ ಲೇಟ್ ವೆಂಕಟಯ್ಯ ರವರು, ರಾಮನಗರ ಜಿಲ್ಲೆ, ಹಾರೋಹಳ್ಳಿ ತಾಲ್ಲೂಕು, ಹಾರೋಹಳ್ಳಿ ಹೋಬಳಿ, ಮೇಡಮಾರನಹಳ್ಳಿ ಗ್ರಾಮದಲ್ಲಿ ದಿನಾಂಕ 05.07.1975 ರಂದು ಮರಣ ಹೊಂದಿದ್ದು, ಇವರ ಮರಣ ಪ್ರಮಾಣ ಪತ್ರವನ್ನು ನೀಡುವಂತೆ ಎದುರುದಾರರಿಗೆ ನಿರ್ದೇಶನ ನೀಡುವಂತೆ ಹಾಗೂ ನ್ಯಾಯಾಲಯದ ಆದೇಶವನ್ನು ಕೋರಿ ಈ ಪ್ರಕರಣವನ್ನು ಸಲ್ಲಿಸಿದ್ದು, ಇವರ ಮರಣ ದಿನಾಂಕದ ಬಗ್ಗೆ ಯಾರದಾದರೂ ತಕರಾರು ಇದ್ದರೆ ಖುದ್ದಾಗಿ ಆಗಲಿ ಅಥವಾ ಅಧಿಕಾರ ಕೊಟ್ಟ ವಕೀಲರ ಮುಖಾಂತರವಾಗಲೀ ನ್ಯಾಯಾಲಯ ನಿಗಧಿಪಡಿಸಿದ ದಿನಾಂಕದಂದು ಅಂದರೆ, 23.05.2024ರ ಬೆಳಿಗ್ಗೆ ಸರಿಯಾಗಿ 11=00 ಘಂಟೆಗೆ ನ್ಯಾಯಾಲಯದ ಮುಂದೆ ಹಾಜರಾಗಿ ತಕರಾರು ಸಲ್ಲಿಸತಕ್ಕದ್ದು, ತಪ್ಪಿದಲ್ಲಿ ಯಾರದ್ದೂ ತಕರಾರೂ ಇಲ್ಲವೆಂದು ಪರಿಗಣಿಸಿ ಉಲ್ಲೇಖಿತ ಪ್ರಕರಣವನ್ನು ಮುಂದುವರೆಸಿ ಇತ್ಯರ್ಥಗೊಳಿಸಲಾಗುವುದು.

2024ರ ಏಪ್ರಿಲ್ 08ನೇ ತಾರೀಖು ಈ ದಿವಸ ನನ್ನ ಸಹಿ ಮತ್ತು ನ್ಯಾಯಾಲಯದ ಮೊಹರಿನೊಂದಿಗೆ ಹೊರಡಿಸಲಾಗಿದೆ.

ಮಾನ್ಯ ನ್ಯಾಯಾಲಯದ ಆದೇಶದ ಮೇರೆಗೆ
ಶಿರಸ್ತೇದಾರರು,
ಮಾನ್ಯ ಪ್ರಧಾನ ಸಿವಿಲ್ ನ್ಯಾಯಾಧೀಶರು ಜೆ.ಎಂ.ಎಫ್.ಸಿ. ನ್ಯಾಯಾಲಯ, ಕನಕಪುರ

ಅರ್ಜಿದಾರರ ಪರ ವಕೀಲರು
ಶ್ರೀಕಂಠ.ಎನ್ ಮತ್ತು ವಿದ್ಯಾಶ್ರೀ ಜೆ.
ವಕೀಲರು, ಕನಕಪುರ
ಸ್ಥಳ : ಕನಕಪುರ
ದಿನಾಂಕ:

ಮಾನ್ಯ ಪ್ರಧಾನ ಸಿವಿಲ್ ನ್ಯಾಯಾಧೀಶರ ಮತ್ತು ಜೆ.ಎಂ.ಎಫ್.ಸಿ., ನ್ಯಾಯಾಲಯ, ಕನಕಪುರ
ಸಿ.ಮಿಸ್.ನಂ. 289/2024

ಅರ್ಜಿದಾರರು: ಶ್ರೀಮತಿ ವೆಂಕಟಲಕ್ಷ್ಮಮ್ಮ ಕೋಂ ಲೇಟ್ ರವಿಚಂದ್ರನ್ ವಯಸ್ಸು 60 ವರ್ಷ ವಾಸ: ಮೇಡಮಾರನಹಳ್ಳಿ ಗ್ರಾಮ, ಹಾರೋಹಳ್ಳಿ ಹೋಬಳಿ, ಹಾರೋಹಳ್ಳಿ ತಾಲ್ಲೂಕು, ರಾಮನಗರ ಜಿಲ್ಲೆ. ಮತ್ತು ಇತರರು.

ವಿರುದ್ಧ

ಪ್ರತಿ ಅರ್ಜಿದಾರರು: 1. ಜನನ ಮತ್ತು ಮರಣ ನೊಂದಣಿ ಅಧಿಕಾರಿಗಳು, ತಹಶೀಲ್ದಾರ್ ಕನಕಪುರ, ಕನಕಪುರ ತಾಲ್ಲೂಕು, ರಾಮನಗರ ಜಿಲ್ಲೆ. 2. ಗ್ರಾಮ ಲೆಕ್ಕಾಧಿಕಾರಿಗಳು, ಮೇಡಮಾರನಹಳ್ಳಿ ವೃತ್ತ ಹಾರೋಹಳ್ಳಿ ಹೋಬಳಿ, ಹಾರೋಹಳ್ಳಿ ತಾಲ್ಲೂಕು, ರಾಮನಗರ ಜಿಲ್ಲೆ.

ಪ್ರಕಟಣೆ

ಮೇಲ್ಕಾಣಿಸಿರುವ ಅರ್ಜಿದಾರರು ಈ ಮೂಲಕ ತಿಳಿಯಪಡಿಸುವುದೇನೆಂದರೆ, 1 ಮತ್ತು 2ನೇ ಅರ್ಜಿದಾರರ ಸಹೋದರ, 3 ರಿಂದ 5ನೇ ಅರ್ಜಿದಾರರ ಮಾವ ಮತ್ತು 6 ರಿಂದ 8ನೇ ಅರ್ಜಿದಾರರ ದೊಡ್ಡಪ್ಪನವರಾದ ಗುಂಡಯ್ಯ ಬಿನ್ ಲೇಟ್ ಬುಡ್ಡವೆಂಕಟಯ್ಯ ರವರು, ರಾಮನಗರ ಜಿಲ್ಲೆ, ಹಾರೋಹಳ್ಳಿ ತಾಲ್ಲೂಕು, ಹಾರೋಹಳ್ಳಿ ಹೋಬಳಿ, ಮೇಡಮಾರನಹಳ್ಳಿ ಗ್ರಾಮದಲ್ಲಿ ದಿನಾಂಕ 07.12.1968 ರಂದು ಮರಣ ಹೊಂದಿದ್ದು, ಇವರ ಮರಣ ಪ್ರಮಾಣ ಪತ್ರವನ್ನು ನೀಡುವಂತೆ ಎದುರುದಾರರಿಗೆ ನಿರ್ದೇಶನ ನೀಡುವಂತೆ ಹಾಗೂ ನ್ಯಾಯಾಲಯದ ಆದೇಶವನ್ನು ಕೋರಿ ಈ ಪ್ರಕರಣವನ್ನು ಸಲ್ಲಿಸಿದ್ದು, ಇವರ ಮರಣ ದಿನಾಂಕದ ಬಗ್ಗೆ ಯಾರದಾದರೂ ತಕರಾರು ಇದ್ದರೆ ಖುದ್ದಾಗಿ ಆಗಲಿ ಅಥವಾ ಅಧಿಕಾರ ಕೊಟ್ಟ ವಕೀಲರ ಮುಖಾಂತರವಾಗಲೀ ನ್ಯಾಯಾಲಯ ನಿಗಧಿಪಡಿಸಿದ ದಿನಾಂಕದಂದು ಅಂದರೆ, 23.05.2024ರ ಬೆಳಿಗ್ಗೆ ಸರಿಯಾಗಿ 11=00 ಘಂಟೆಗೆ ನ್ಯಾಯಾಲಯದ ಮುಂದೆ ಹಾಜರಾಗಿ ತಕರಾರು ಸಲ್ಲಿಸತಕ್ಕದ್ದು, ತಪ್ಪಿದಲ್ಲಿ ಯಾರದ್ದೂ ತಕರಾರೂ ಇಲ್ಲವೆಂದು ಪರಿಗಣಿಸಿ ಉಲ್ಲೇಖಿತ ಪ್ರಕರಣವನ್ನು ಮುಂದುವರೆಸಿ ಇತ್ಯರ್ಥಗೊಳಿಸಲಾಗುವುದು.

2024ರ ಏಪ್ರಿಲ್ 08ನೇ ತಾರೀಖು ಈ ದಿವಸ ನನ್ನ ಸಹಿ ಮತ್ತು ನ್ಯಾಯಾಲಯದ ಮೊಹರಿನೊಂದಿಗೆ ಹೊರಡಿಸಲಾಗಿದೆ.

ಮಾನ್ಯ ನ್ಯಾಯಾಲಯದ ಆದೇಶದ ಮೇರೆಗೆ
ಶಿರಸ್ತೇದಾರರು,
ಮಾನ್ಯ ಪ್ರಧಾನ ಸಿವಿಲ್ ನ್ಯಾಯಾಧೀಶರು ಜೆ.ಎಂ.ಎಫ್.ಸಿ. ನ್ಯಾಯಾಲಯ, ಕನಕಪುರ

ಅರ್ಜಿದಾರರ ಪರ ವಕೀಲರು
ಶ್ರೀಕಂಠ.ಎನ್ ಮತ್ತು ವಿದ್ಯಾಶ್ರೀ ಜೆ.
ವಕೀಲರು, ಕನಕಪುರ
ಸ್ಥಳ : ಕನಕಪುರ
ದಿನಾಂಕ:

ನೋವಾಗಿದ್ದರೆ ತಾಯಂದಿರ ಕ್ಷಮೆ ಕೋರುತ್ತೇನೆ : ಕುಮಾರಸ್ವಾಮಿ | 2 ಸಾವಿರ ಕೊಟ್ಟು, ಐದು ಸಾವಿರ ಕಸಿಯುವ ಪ್ರಯತ್ನ ಎಂದಿದ್ದೆ | ಮಹಿಳಾ ಕಾಂಗ್ರೆಸಿಗರು ಪ್ರತಿಭಟನೆ ಮಾಡೋದು ಬೇಡ

ವಿವಾದದ ಬೆನ್ನಲ್ಲೇ ಕ್ಷಮೆ ಕೋರಿದ ಎಚ್‌ಡಿಕೆ

ವಿಶ್ವವಾಣಿ ಸುದ್ದಿಮನೆ ಬೆಂಗಳೂರು

ನನ್ನ ಹೇಳಿಕೆಯಿಂದ ತಾಯಂದಿರಿಗೆ ನೋವಾಗಿದ್ದರೆ ನಾನು ವಿಷಾದಿಸುತ್ತೇನೆ. ಮಹಿಳೆಯರನ್ನು ಅಪಮಾನಿಸಿಲ್ಲ, ಅಂತಹ ಜಾಯಮಾನವೂ ನನ್ನದಲ್ಲ, ವಿಷಾದಿಸುವುದಕ್ಕೆ ನನಗೆ ಯಾವ ಪ್ರತಿಷ್ಠೆಯೂ ಇಲ್ಲ ಎಂದು ಮಾಜಿ ಮುಖ್ಯಮಂತ್ರಿ ಎಚ್.ಡಿ. ಕುಮಾರಸ್ವಾಮಿ ಸ್ಪಷ್ಟಪಡಿಸಿದರು.

ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಅಳಬೇಡಪ್ಪ ಡಿ.ಕೆ.ಶಿವಕುಮಾರ್. ನಾನೇನು ವಿಷಾದ ವ್ಯಕ್ತಪಡಿಸುತ್ತೇನೆ. ನೀನು ದುಃಖ ಪಡಬೇಡಪ್ಪ. ನೀನು ಏನ್ ದುಃಖ ಪಟ್ಟಿದ್ದೀಯಾ ಎನ್ನುವುದನ್ನು ನೋಡಿದ್ದೇನೆ. ಕಾಂಗ್ರೆಸ್ ಮಹಿಳಾ ನಾಯಕಿಯರಿಗೆ ದುಃಖವಾಗಿದ್ದರೆ ಅದಕ್ಕೂ ವಿಷಾದ ವ್ಯಕ್ತಪಡಿಸುತ್ತೇನೆ. ಯಾರಿಗೇ ದುಃಖವಾಗಿಗಿದ್ದರೂ ವಿಷಾದ ವ್ಯಕ್ತಪಡಿಸುತ್ತೇನೆ. ಆದರೆ ನಾನು ಇವರಂತೆ ಕೆನ್ನೆ ನೆಕ್ಕೋದು, ಹೆಣ್ಣು ಮಕ್ಕಳಿಗೆ ರೇಟ್‌ಫಿಕ್ಸ್ ಮಾಡಿದ ರೀತಿ ನಾನು ಮಾತನಾಡಿಲ್ಲ, ನಾನು ತಪ್ಪು ಮಾಡಿಲ್ಲ, ಜನರಿಗೇ ನನ್ನ ಹೇಳಿಕೆಯನ್ನು ಬಿಡುತ್ತೇನೆ. ಅವರೇ ತೀರ್ಮಾನ ಮಾಡಲಿ ಎಂದು ವಾಗ್ದಾಳಿ ನಡೆಸಿದರು.

ಗಂಡಂದಿರ ಜೇಬಿನಿಂದ ಪಿಕ್ ಪಾಕೇಟ್

ಸಿಎಂ ನನ್ನ ಸಂಸ್ಕೃತಿ ತೋರಿಸುತ್ತೆ ಎಂದು ಹೇಳಿಕೆ ನೀಡಿದ್ದಾರೆ. ನಿಮ್ಮ ಪಕ್ಷದ ಸಂಸ್ಕೃತಿಯ ಬಗ್ಗೆ ಹೇಳಬೇಕೆ? ನನ್ನ ಬಳಿ ಕಂತೆ ಕಂತೆ ಮಾಹಿತಿಯಿದೆ. ನಾಡಿನ ತಾಯಂದಿರಿಗೆ ನಾನು ಕೇಳುವುದು ಇಷ್ಟೇ.. ಇವರು 2000 ರು. ಕೊಟ್ಟು ನಿಮ್ಮ ಯಜಮಾನರ ಜೇಬಿಂದ 5000 ಕೀಳುತ್ತಿದ್ದಾರೆ. ನಿಮ್ಮ ಗಂಡಂದಿರ ಜೇಬಿನಿಂದ ಪಿಕ್ ಪಾಕೆಟ್ ಮಾಡುತ್ತಿದ್ದಾರೆ. ಇದರಿಂದ ಎಚ್ಚರದಿಂದ ಇರಿ ಎಂದು ತಾಯಂದಿರಿಗೆ ಹೇಳಿದ್ದೇನೆ ಎಂದರು.

ಸಚಿವರು, ನಾಯಕರು, ಕಾಂಗ್ರೆಸ್ ಮಹಿಳಾ ಘಟಕದವರು ಮಂಡ್ಯದಲ್ಲಿ ಗೋ ಬ್ಯಾಕ್ ಕುಮಾರಸ್ವಾಮಿ ಎಂದು ಪ್ರತಿಭಟನೆ ಮಾಡಿದ್ದಾರೆ. ಅಲ್ಲಿಗೆ ಬಂದ ಹೆಣ್ಣುಮಕ್ಕಳನ್ನು ಇಲ್ಲಿಗೆ ಏಕೆ ಬಂದಿದ್ದೀರಿ ಎಂದು ಕೇಳಿದರೆ, ಏಕೆ ಬಂದಿದ್ದೇವೆ ಎನ್ನುವುದು ಗೊತ್ತಿಲ್ಲ ಅಂತ ಹೇಳುತ್ತಾರೆ. ಆದರೆ ಆ ತಾಯಂದಿರಿಗೆ ತಮ್ಮ ಪಕ್ಷದ ನಾಯಕರೇ ಮಹಿಳೆಯರಿಗೆ ಮಾಡಿರುವ ಘೋರ ಅಪಮಾನದ ಬಗ್ಗೆ ಗೊತ್ತಿಲ್ಲ. ಇಂಥ ರಾಜಕೀಯ ಆಟಗಳಿಗೆ ನಾನೇನು ಹೆದರುವ ಆಸಾಮಿ ಅಲ್ಲ ಎಂದು ತಿರುಗೇಟು ಕೊಟ್ಟರು.



ಸುದ್ದಿಗೋಷ್ಠಿಯಲ್ಲಿ ಮಾಜಿ ಸಿಎಂ ಎಚ್.ಡಿ.ಕುಮಾರಸ್ವಾಮಿ ಮಾತನಾಡಿದರು

ದೇವೇಗೌಡರನ್ನು ಪ್ರಧಾನಿ ಮಾಡಿದ್ದು ನಾವೆಂದು ಕಾಂಗ್ರೆಸ್‌ನವರು ಹೇಳುತ್ತಾರೆ. ಅದೇ ದೇವೇಗೌಡರನ್ನು ಪ್ರಧಾನಿ ಸ್ಥಾನದಿಂದ ಏಕೆ ಇಳಿಸಿದಿರಿ? ಸಿದ್ದರಾಮಯ್ಯ ಅವರೇ ಉತ್ತರ ಕೊಡಿ. ಇವತ್ತು ನಮ್ಮ-ಬಿಜೆಪಿ ಸಂಬಂಧದ ಬಗ್ಗೆ ಮಾತನಾಡುತ್ತೀರಿ. ನಾಯಿ ಹಸಿದಿತ್ತು, ಅನ್ನ ಹಳಸಿತ್ತು ಎನ್ನುತ್ತೀರಿ. 2018ರಲ್ಲಿ ನಮ್ಮ ಮನೆಗೆ ನೀವು ಬಂದಾಗ ನೀವು ನಾಯಿ ಸ್ಥಾನದಲ್ಲಿ ಇದ್ದೀರಾ? ಅಥವಾ ಹಳಸಿದ ಅನ್ನದ ಸ್ಥಾನದಲ್ಲಿ ಇದ್ದೀರಾ?

- ಎಚ್.ಡಿ. ಕುಮಾರಸ್ವಾಮಿ,
ಮಾಜಿ ಮುಖ್ಯಮಂತ್ರಿ